**ದಿನಾಂಕ: 02.07.2022 ರಂದು ಬೆಳಿಗ್ಗೆ 11.30ಕ್ಕೆ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್–178 (ಸಾರಕ್ಕಿ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾರ್ಡ್–178ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ, ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್–19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| **ಅಧ್ಯಕ್ಷರು** | ನೋಡಲ್ ಅಧಿಕಾರಿ |
| **ಸದಸ್ಯ ಕಾರ್ಯದರ್ಶಿ** | ವಾರ್ಡ್ 178ರ ಸಹಾಯಕ ಅಭಿಯಂತರರು |
| **ಸದಸ್ಯರುಗಳು** | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| **ಸದಸ್ಯರುಗಳು** | ಬೆಸ್ಕಾಂ |
| **ಸದಸ್ಯರುಗಳು** | ತೋಟಗಾರಿಕಾ ಇಲಾಖೆಯ ಅಧಿಕಾರಿಗಳು |
| **ಸದಸ್ಯರುಗಳು** | ಅರಣ್ಯ ಇಲಾಖೆ ಅಧಿಕಾರಿಗಳು |
| **ಸದಸ್ಯರುಗಳು** | ಕಂದಾಯ ಪರಿವೀಕ್ಷಕರು |
| **ಸದಸ್ಯರುಗಳು** | ಬಿಡಬ್ಲ್ಯೂಎಸ್ಎಸ್‌ಬಿ ಅಧಿಕಾರಿಗಳು |
| **ಸದಸ್ಯರುಗಳು** | ಜೆ.ಪಿ.ನಗರ ಪೋಲೀಸ್ ಠಾಣಾ ಅಧಿಕಾರಿಗಳು |
| **ಸದಸ್ಯರುಗಳು** | ವಾರ್ಡ್ 178 ರ UPHC ನ ವೈದ್ಯರು |
| **ಸದಸ್ಯರುಗಳು** | ಜೆ.ಪಿ.ನಗರ 2ನೇ ಹಂತ ನಾಗರೀಕ ಕಲ್ಯಾಣ ಸಂಘದ ಸದಸ್ಯರು ಹಾಗೂ ನಾಗರೀಕರು |
| **ಸಾರ್ವಜನಿಕರು** | ಮಾರ್ಷಲ್ |

## :ನಡಾವಳಿಯ ವರದಿ:

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- ಧನ್ವಂತರಿ ಪಾರ್ಕಿನಲ್ಲಿ ಒಣಗಿರುವ ಮರದ ರೆಂಬೆ–ಕೊಂಬೆಗಳು ಹಾಗೂ ಮರ ಕತ್ತರಿಸಿರುವ ಕೊಂಬೆಗಳನ್ನು ತೆರವುಗೊಳಿಸುವಂತೆ ಚರ್ಚಿಸಲಾಯಿತು.

  **ಕ್ರಮ : ತೋಟಗಾರಿಕೆ ಇಲಾಖೆ**

- ಧನ್ವಂತರಿ ಪಾರ್ಕಿನ ಮುಂಭಾಗದಲ್ಲಿ ರಸ್ತೆ ಡಾಂಬರೀಕರಣವನ್ನು ಹಾಕುವಂತೆ ಚರ್ಚಿಸಲಾಯಿತು.

  **ಕ್ರಮ : ಸ.ಕಾ.ನಿ.ಅ., ಜೆ.ಪಿ.ನಗರ**

- ಧನ್ವಂತರಿ ಪಾರ್ಕಿನ ಒಳಭಾಗದಲ್ಲಿ ನೇತಾಡುತ್ತಿರುವ ಕೇಬಲ್ ವೈರ್‌ಗಳನ್ನು ತೆರವುಗೊಳಿಸುವ ಬಗ್ಗೆ ಚರ್ಚಿಸಲಾಯಿತು.

  **ಕ್ರಮ :ತೋಟಗಾರಿಕೆ ಇಲಾಖೆ (ದಕ್ಷಿಣ)**

*ಪು.ತಿ.ನೋ.*

- ಧನ್ವಂತರಿ ಪಾರ್ಕಿನ ಶೌಚಾಲಯದ ಮೇಲೆ ನೀರಿನ ಟ್ಯಾಂಕ್‌ಅನ್ನು ಅಳವಡಿಸುವಂತೆ ಹಾಗೂ 21ನೇ ಮುಖ್ಯರಸ್ತೆಯ ಫುಟ್‌ಪಾತ್ ಜಾಗದಲ್ಲಿ ಹಣ್ಣಿನ ಅಂಗಡಿ, ತಳ್ಳುವ ಗಾಡಿಗಳನ್ನು ಹಾಕಿಕೊಂಡು ವ್ಯಾಪಾರ ಮಾಡುತ್ತಿರುವವರವನ್ನು ತೆರವುಗೊಳಿಸುವಂತೆ ಹಾಗೂ 20ನೇ ಮುಖ್ಯರಸ್ತೆಯ ಕಡೆ ತಂತಿಬೇಲಿಯು ದುರಸ್ಥಿಗೊಂಡಿರುವುದಾಗಿ, ಕೂಡಲೇ ಸರಿಪಡಿಸುವಂತೆ ಚರ್ಚಿಸಲಾಯಿತು.

**ಕ್ರಮ : ಸ.ಕಾ.ನಿ.ಅ.ಜೆ.ಪಿ.ನಗರ ಹಾಗೂ ಯೋಜನೆ (ದಕ್ಷಿಣ) ವಿಭಾಗ**

- 12ನೇ ಮುಖ್ಯರಸ್ತೆಯ ಪಾದಚಾರಿ ರಸ್ತೆಯ ಮೇಲೆ ನರ್ಸರಿಯವರು ಸಿಮೆಂಟ್ ಬ್ಲಾಕ್‌ಅನ್ನು ಇಟ್ಟುಕೊಂಡಿದ್ದು, ಇದರಿಂದಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಚರ್ಚಿಸಲಾಯಿತು.

**ಕ್ರಮ : ಸ.ಕಾ.ನಿ.ಅ., ಜೆ.ಪಿ.ನಗರ ಉಪವಿಭಾಗ**

- 24ನೇ ಮುಖ್ಯರಸ್ತೆಯ ಶೌಚಾಲಯಕ್ಕೆ ನಾಮಫಲಕವನ್ನು ಅಳವಡಿಸುವಂತೆ ಕೋರಲಾಯಿತು.

**ಕ್ರಮ : ಸ.ಕಾ.ನಿ.ಅ.,ಜೆ.ಪಿ.ನಗರ**

- 23ನೇ ಮುಖ್ಯರಸ್ತೆಯಲ್ಲಿನ ಬೀದಿ ದೀಪಗಳು ಆಗಾಗ್ಗೆ ದುರಸ್ಥಿಗೊಳ್ಳುತ್ತಿದ್ದು, ಕೂಡಲೇ ಸರಿಪಡಿಸುವಂತೆ ಚರ್ಚಿಸಲಾಯಿತು.

**ಕ್ರಮ : ಬೀದಿ ದೀಪ ನಿರ್ವಹಣೆ ವಿಭಾಗ**

- ಸಾರಕ್ಕಿ ವ್ಯಾಪ್ತಿಯ ಎಲ್ಲಾ ರಸ್ತೆಗಳಲ್ಲಿ ಪಾರ್ಕಿಂಗ್ ಮತ್ತು ನೋ-ಪಾರ್ಕಿಂಗ್ ಬೋರ್ಡ್‌ಗಳನ್ನು ಅಳವಡಿಸುವ ಬಗ್ಗೆ ಚರ್ಚಿಸಲಾಯಿತು.

**ಕ್ರಮ : ಜಯನಗರ ಸಂಚಾರಿ ಪೊಲೀಸ್ ಠಾಣೆ**

- 12ನೇ ಅಡ್ಡರಸ್ತೆ, ಎಸ್.ಎನ್. ಹೋಟೆಲ್ ಮುಂಭಾಗದಲ್ಲಿ ಡೇಬ್ರೀಸ್ ಅನ್ನು ಹಾಕಿದ್ದು, ಅದನ್ನು ತೆರವುಗೊಳಿಸುವಂತೆ ಚರ್ಚಿಸಲಾಯಿತು.

**ಕ್ರಮ : ಸ.ಕಾ.ನಿ.ಅ., ಜೆ.ಪಿ.ನಗರ**

- 37ನೇ ಮುಖ್ಯರಸ್ತೆ, ಜೆ.ಪಿ.ನಗರ 6ನೇ ಹಂತದಲ್ಲಿ ರಸ್ತೆಯು ಕಿರಿದಾಗಿದ್ದು, ಅದನ್ನು ಅಗಲೀಕರಣಗೊಳಿಸಬೇಕಾಗಿ, ಭಾರಿ ವಾಹನಗಳು ಚಲಿಸದಂತೆ ರೋಡ್ ಬ್ಯಾರಿಕೇಡಿಂಗ್ ಹಾಕುವಂತೆ ಹಾಗೂ ವಾಹನ ದಟ್ಟಣೆ ಬಗ್ಗೆ ಚರ್ಚಿಸಲಾಯಿತು.

**ಕ್ರಮ : ರೋಡ್ ವೈಡನಿಂಗ್ ಇಲಾಖೆ ಹಾಗೂ ಪುಟ್ಟೇನಹಳ್ಳಿ ಸಂಚಾರಿ ಪೊಲೀಸ್ ಠಾಣೆ**

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 11.30 ಕ್ಕೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು. ಹಾಗೂ ಗೈರು ಹಾಜರಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಮಾನ್ಯ ಆಯುಕ್ತರವರಿಗೆ ಸೂಚಿಸಲಾಗುವುದೆಂದು ತಿಳಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಇಂಜಿನಿಯರ್‌ರಾದ ಶ್ರೀ ಅಶ್ವತ್‌ರಾಮನ್ .ಆರ್, ವಾರ್ಡ್ 178 ಸಾರಕ್ಕಿ, ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ

**ಹಾಗೂ ವಾರ್ಡ್178 ರ ಸಹಾಯಕ ಅಭಿಯಂತರರು**

**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**